# ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು

**ವಿಧಾನ ಸಭಾ ಸದಸ್ಯರಾದ ಮಾನ್ಯ ಶ್ರೀ ಬಾಲಚಂದ್ರ ಲಕ್ಷ್ಮಣ್‌ರಾವ್ ಜಾರಕಿಹೊಳಿ(ಅರಭಾವಿ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ-1031ಕ್ಕೆ ನಿಗಮದ ಉತ್ತರ.**

| ಕ್ರ. ಸಂ. | ಪ್ರಶ್ನೆ | ನಿಗಮದ ಉತ್ತರ |
|---|---|---|
| 1 | 2 | 3 |
| ಅ) | ರಾಜ್ಯದಲ್ಲಿ ಈ ಹಿಂದಿನ ಸರ್ಕಾರವು ಉಪ್ಪಾರ ಅಭಿವೃದ್ಧಿ ನಿಗಮವನ್ನು ಸ್ಥಾಪನೆ ಮಡಿರುವುದು ನಿಜವೇ, | ಹೌದು, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮವನ್ನು ದಿನಾಂಕ:31/10/2017 ರಂದು ಕಂಪನಿ ಕಾಯ್ದೆ 2013ರರನ್ವಯ ನೋಂದಾಯಿಸಿ ಸ್ಥಾಪಿಸಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಸರ್ಕಾರವು ಈ ನಿಗಮದ ಕಾರ್ಯ ಚಟುವಟಿಕೆಗಳಿಗೆ ಮೀಸಲಿಟ್ಟ ಅನುದಾನವೆಷ್ಟು, ಬಿಡುಗಡೆ ಮಾಡಿದ ಅನುದಾನವೆಷ್ಟು (ಮಾಹಿತಿ ನೀಡುವುದು) | ಪ್ರಸಕ್ತ ಸಾಲಿನಲ್ಲಿ ಸರ್ಕಾರವು ಈ ನಿಗಮದ ಕಾರ್ಯ ಚಟುವಟಿಕೆಗಳಿಗೆ ಆಯವ್ಯಯದಲ್ಲಿ ರೂ.200.00ಲಕ್ಷಗಳನ್ನು ಮೀಸಲಿಡಲಾಗಿದೆ. ಇದರಲ್ಲಿ ರೂ.150.00ಲಕ್ಷಗಳನ್ನು ಬಿಡುಗಡೆ ಮಾಡಿದೆ. |
| ಇ) | ಬೆಳಗಾವಿ ಜಿಲ್ಲೆಯ ಉಪ್ಪಾರ ಸಮಾಜಕ್ಕೆ ನಿಗಮದ ವತಿಯಿಂದ ಯಾವ ಯಾವ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಈ ಯೋಜನೆಗಳಿಗೆ ಸರ್ಕಾರ ಇದುವರೆಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು | ಬೆಳಗಾವಿ ಜಿಲ್ಲೆಯ ಉಪ್ಪಾರ ಸಮಾಜಕ್ಕೆ ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದ ವತಿಯಿಂದ ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಈ ಯೋಜನೆಗಳಿಗೆ ಬೆಳಗಾವಿ ಜಿಲ್ಲೆಗೆ ನಿಗದಿಪಡಿಸಿದ ಭೌತಿಕ ಮತ್ತು ಆರ್ಥಿಕ ಗುರಿ ಈ ಕೆಳಕಂಡಂತಿದೆ.<br>**(ಲಕ್ಷ ರೂ.ಗಳಲ್ಲಿ)**<br>(table below)<br>ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ. |

**(ಲಕ್ಷ ರೂ.ಗಳಲ್ಲಿ)**

| ಕ್ರ.ಸಂ | ಯೋಜನೆಯ ಹೆಸರು | ಭೌತಿಕ | ಆರ್ಥಿಕ |
|---|---|---|---|
| 1 | ಸ್ವಯಂ ಉದ್ಯೋಗ ಸಾಲ ಯೋಜನೆ | 72 | 36.00 |
| 2 | ಅರಿವು ಶೈಕ್ಷಣಿಕ ಸಾಲ ಯೋಜನೆ | 40 | 40.00 |
| 3 | ಗಂಗಾ ಕಲ್ಯಾಣ ನೀರಾವರಿ ಯೋಜನೆ | 7 | 17.50 |
| | **ಒಟ್ಟು** | **119** | **93.50** |

| | | |
|---|---|---|
| ಈ) | ಈ ಸಮಾಜದ ಆರ್ಥಿಕಾಭಿವೃದ್ಧಿಗಾಗಿ ಸರ್ಕಾರ ಘೋಷಿಸಿರುವ ಯೋಜನೆಗಳಾವುವು(ಸಂಪೂರ್ಣ ಮಾಹಿತಿ ನೀಡುವುದು) | ಈ ಸಮಾಜದ ಆರ್ಥಿಕಾಭಿವೃದ್ಧಿಗಾಗಿ ಈ ಕೆಳಕಂಡ ಯೋಜನೆಗಳನ್ನು ನಿಗಮದಿಂದ ಅನುಷ್ಠಾನಗೊಳಿಸಲಾಗುತ್ತಿದೆ.<br>1. **ಸ್ವಯಂ ಉದ್ಯೋಗ ಸಾಲ ಯೋಜನೆ:–** ಉಪ್ಪಾರ ಮತ್ತು ಇದರ ಉಪಜಾತಿಯವರು ಸ್ವಯಂ ಉದ್ಯೋಗ ಕೈಗೊಳ್ಳಲು ಆರ್ಥಿಕ ಚಟುವಟಿಕೆಯನುಸಾರ ಗರಿಷ್ಠ 2.00ಲಕ್ಷ ರೂ.ಗಳ ವರೆಗೆ ಶೇ.4ರ ಬಡ್ಡಿದರದಲ್ಲಿ ಆರ್ಥಿಕ ನೆರವು ಒದಗಿಸಲಾಗುವುದು. ಈ ಮೊತ್ತದಲ್ಲಿ ಶೇ.30 ರಿಂದ 15 ರಷ್ಟು ಸಹಾಯಧನ ಒಳಗೊಂಡಿರುತ್ತದೆ.<br>2. **ಅರಿವು ಶೈಕ್ಷಣಿಕ ಸಾಲ ಯೋಜನೆ:–** ಉಪ್ಪಾರ ಮತ್ತು ಇದರ ಉಪಜಾತಿಗೆ ಸೇರಿದ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳಲ್ಲಿ ಉನ್ನತ ವ್ಯಾಸಂಗಕ್ಕೆ ಗರಿಷ್ಠ ವಾರ್ಷಿಕ 1.00ಲಕ್ಷ ರೂ.ಗಳಂತೆ ಕೋರ್ಸ್‌ನ ಅವಧಿಗೆ ಗರಿಷ್ಠ ರೂ.4.00ಲಕ್ಷಗಳಿಂದ ರೂ.5.00ಲಕ್ಷಗಳವರೆಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ಸಾಲ ಒದಗಿಸಲಾಗುವುದು. ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ವಾರ್ಷಿಕ ರೂ.5.00ಲಕ್ಷಗಳಂತೆ 3 ವರ್ಷಗಳ ಅವಧಿಗೆ ಶೇ.4ರ ಬಡ್ಡಿದರದಲ್ಲಿ ರೂ.15.00ಲಕ್ಷಗಳ ಸಾಲ ಒದಗಿಸುವುದು.<br>3. **ಗಂಗಾ ಕಲ್ಯಾಣ ನೀರಾವರಿ ಯೋಜನೆ:–** ಉಪ್ಪಾರ ಮತ್ತು ಇದರ ಉಪಜಾತಿಗೆ ಸೇರಿದ ಸಣ್ಣ ಮತ್ತು ಅತಿಸಣ್ಣ ರೈತರ ಜಮೀನಿಗೆ ನೀರಾವರಿ ಸೌಲಭ್ಯವನ್ನು ಗಂಗಾ ಕಲ್ಯಾಣ ನೀರಾವರಿ ಯೋಜನೆಯ ಘಟಕವೆಚ್ಚ 2.50ಲಕ್ಷ ರೂ.ಗಳಲ್ಲಿ ನೀರಾವರಿ ಸೌಲಭ್ಯ ಒದಗಿಸಲಾಗುವುದು. |

ವ್ಯವಸ್ಥಾಪಕ ನಿರ್ದೇಶಕರು.